ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 22
ಮಾನ್ಯ ಸದಸ್ಯರ ಹೆಸರು	: ಶ್ರೀ ಯು.ಬಿ ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	: 13-12-2021
ಉತ್ತರಿಸುವ ಸಚಿವರು	: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕೋವಿಡ್ ಸಂದರ್ಭದಲ್ಲಿ ನಿಗದಿಗಿಂತ ಅಧಿಕ ಶುಲ್ಕ ವಸೂಲು ಮಾಡಿರುವ ಆಸ್ಪತ್ರೆಗಳ ಬಗ್ಗೆ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಅಂತಹ ಆಸ್ಪತ್ರೆಗಳ ವಿವರಗಳನ್ನು ಒದಗಿಸುವುದು.	ಬಂದಿದೆ. ಆಸ್ಪತ್ರೆಗಳ ವಿವರಗಳನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ.
ಆ	ಈವರೆಗೆ ಎಷ್ಟು ಜನ ಕೋರೋನಾ ಪೀಡಿತರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ; ಎಷ್ಟು ಜನರಿಗೆ ಸರ್ಕಾರ ಚಿಕಿತ್ಸಾ ವೆಚ್ಚವನ್ನು ಭರಿಸಲಾಗಿದೆ; ಯಾವ ಯಾವ ಆಸ್ಪತ್ರೆಗಳಿಗೆ ಎಷ್ಟು ಮೊತ್ತದ ಚಿಕಿತ್ಸಾ ವೆಚ್ಚವನ್ನು ಪಾವತಿಸಲಾಗಿದೆ;	ಈವರೆಗೆ 1,36,160 ಕೋವಿಡ್-19 ಸೋಂಕಿತರು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರುತ್ತಾರೆ. 1,17,690 ಕೋವಿಡ್-19 ಸೋಂಕಿತರು ಸರ್ಕಾರದಿಂದ ವೆಚ್ಚ ಭರಿಸಲಾಗುತ್ತದೆ ಹಾಗೂ ಆಸ್ಪತ್ರೆಗಳಿಗೆ ಪಾವತಿಸಲಾದ ಚಿಕಿತ್ಸಾ ವೆಚ್ಚದ ಕುರಿತು ಮಾಹಿತಿಯನ್ನು **ಅನುಬಂಧ-2ರಲ್ಲಿ** ಲಗತ್ತಿಸಿದೆ.
ಇ	ನಿಗಧಿಗಿಂತ ಅಧಿಕ ಶುಲ್ಕ ವಸೂಲು ಮಾಡಿದ ಆಸ್ಪತ್ರೆಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಕೋವಿಡ್-19 ರೋಗಿಗಳಿಂದ ನಿಗಧಿಗಿಂತ ಅಧಿಕ ಶುಲ್ಕ ವಸೂಲು ಮಾಡಿರುವ ಆಸ್ಪತ್ರೆಗಳ ಬಗ್ಗೆ ಬಂದ ದೂರುಗಳನ್ನು ನಿವಾರಿಸಲು ಸಂಬಂಧಪಟ್ಟ ಆಸ್ಪತ್ರೆಗೆ ನೋಟಿಸ್ ನೀಡಲಾಗಿರುತ್ತದೆ. ಅವರು ರೋಗಿಗಳಿಂದ ವಸೂಲಿ ಮಾಡಿರುವ ಮೊತ್ತವನ್ನು ಆಸ್ಪತ್ರೆಯು ಮರುಪಾವತಿ ಮಾಡದೇ ಇರುವ ಸಂದರ್ಭದಲ್ಲಿ ವಿಚಾರಣೆ ನಡೆಸಿ ಆಸ್ಪತ್ರೆಗೆ ಪಾವತಿ ಮಾಡಬೇಕಾಗಿರುವ ಕ್ಲೇಮ್ಸ್ ಹಣದಿಂದ ಕಡಿತಗೊಳಿಸಿ ದೂರುದಾರರಿಗೆ ಮರುಪಾವತಿಸಲು ಕ್ರಮಕೈಗೊಳ್ಳಲಾಗುತ್ತಿದೆ.

ಆಕುಕ 136 ಎಸ್‌ಬಿವಿ 2021

(ಡಾ॥ ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು